ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ : ಕಾಶಿಇ/ಶೈವಿ/107/ಕೋ.ಮಾ.ಸೂ/2020-21

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ : 21.01.2022

**ಸುತ್ತೋಲೆ**

ವಿಷಯ : ಕೋವಿಡ್-19 ರೋಗನಿಮಿತ್ತ ಸರ್ಕಾರಿ / ಖಾಸಗಿ ಅನುದಾನಿತ ಪದವಿ ಕಾಲೇಜಿನ ತರಗತಿಗಳನ್ನು ರದ್ದುಗೊಳಿಸುವ ಕುರಿತು.

*****

"Omicron Virus" / Covid -19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದು ಸದರಿ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಆರೋಗ್ಯದ ಹಿತದೃಷ್ಟಿಯನ್ನು ಪರಿಗಣಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ರಾಜ್ಯದ ಯಾವುದಾದರೂ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕೊರೋನ ಪಾಸಿಟಿವ್ ವರದಿಯು ಕಂಡುಬಂದಲ್ಲಿ ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳು ಅಂತಹ ಕಾಲೇಜುಗಳನ್ನು ಮುಚ್ಚಲು ಆದೇಶಿಸಿದ್ದಲ್ಲಿ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ತಕ್ಷಣ ಎಲ್ಲಾ ಭೌತಿಕ (ಆಫ್‌ಲೈನ್) ತರಗತಿಗಳನ್ನು ರದ್ದುಗೊಳಿಸಿ ವಿದ್ಯಾರ್ಥಿಗಳ ಬೋಧನಾ ಕಾರ್ಯಕ್ಕೆ ಅಡಚಣೆಯಾಗದಂತೆ ಕ್ರಮವಹಿಸುವುದು ಹಾಗೂ ಎಲ್ಲಾ ಅಧ್ಯಾಪಕರುಗಳು ಕಾಲೇಜಿಗೆ ಆಗಮಿಸಿ ಕಾಲೇಜಿನಿಂದಲೇ ವಿಶ್ವವಿದ್ಯಾಲಯದ ಪಠ್ಯಕ್ರಮದಂತೆ ಬೋಧನಾ ಕಾರ್ಯವನ್ನು ಆನ್‌ಲೈನ್ ಮುಖಾಂತರ ಮತ್ತು ಕಾಲೇಜಿನ ಇತರೆ ಕೆಲಸ ಕಾರ್ಯಗಳನ್ನು ನಿರ್ವಹಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ. ಉಳಿದಂತೆ ಎಲ್ಲಾ ಬೋಧಕೇತರ ಸಿಬ್ಬಂದಿಗಳು ಕಾಲೇಜಿಗೆ ಹಾಜರಾಗಿ ಎಂದಿನಂತೆ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ :**

1) ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

**ಪ್ರತಿಯನ್ನು :**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ– ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ.